# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತಿ.ನರಸೀಪುರ

## ಸಿ.ಸಿ.1203/2021

| | | | | |
|---|---|---|---|---|
| 01 | ಹೆಸರು | ನಾಗೇಂದ್ರ | ಸಿ ಡಬ್ಲೂ | 7 |
| 02 | ತಂದೆಯ ಹೆಸರು | ರಾಮಕೃಷ್ಣ | ಪಿಡಬ್ಲೂ | 4 |
| 03 | ವಯಸ್ಸು | 54 | ಪ್ರಮಾಣೀಕರಿಸಲಾದ ದಿನಾಂಕಃ | |
| 04 | ಉದ್ಯೋಗ | ಎ ಎಸ್ ಐ | 17.03.2026 | |
| 05 | ಊರು | ಬಿಳಿಗೆರೆ | | |

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು 2021 ರಿಂದ 2023 ರವರೆಗೂ ಬನ್ನೂರು ಪೊಲೀಸ್ ಠಾಣೆಯಲ್ಲಿ ಹೆಚ್ ಸಿ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ29.04.2021 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಮಧ್ಯಾಹ್ನ 2.00 ಗಂಟೆಗೆ ಈ ಪ್ರಕರಣದ ದೂರುದಾರರಾದ ಚಾ ಸಾ 1 ರವರು ಠಾಣೆಗೆ ಬಂದು ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂ.96/2021 ರಂತೆ ಪ್ರಕರಣ ದಾಖಲಿಸಿಕೊಂಡು ಪ್ರ ವ ವರದಿಯನ್ನು ಘನ ನ್ಯಾಯಾಲಯಕ್ಕೆ ಮತ್ತು ಪ್ರತಿಯನ್ನು ಮೇಲಧಿಕಾರಿಗಳಿಗೆ ಕಳುಹಿಸಿರುತ್ತೇನೆ.

ದಿಃ30.04.2021 ರಂದು ತನಿಖೆ ಮುಂದುವರಿಸಿ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಅಲ್ಲಿಗೆ ಚಾ ಸಾ 4 ಮತ್ತು 5 ರವರನ್ನು ಬರಮಾಡಿಕೊಂಡು ಅವರ ಸಮಕ್ಷಮ ಚಾ ಸಾ 1 ರವರು ತೋರಿಸಿದ ಕೃತ್ಯ ಸ್ಥಳದಲ್ಲಿ ಬೆಳಗ್ಗೆ 10.00-10.30 ಗಂಟೆಯವರೆಗೂ ಮಹಜರು ಕ್ರಮವನ್ನು ಜರುಗಿಸಿರುತ್ತೇನೆ. ಅದೇ ದಿನ ಚಾ ಸಾ 1 ರವರ ಮರು ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ಈ ಪ್ರಕರಣದ ಈ ಸಾಕ್ಷಿದಾರರಾದ ಚಾ ಸಾ 2 ಮತ್ತು 3 ರವರನ್ನು ಹೇಳಿಕೆಗಳನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿರುತ್ತೇನೆ. ದಿಃ05.07.2021 ರಂದು ಚಾ ಸಾ 6 ರವರಿಂದ ಚಾ ಸಾ 1 ರವರ ಗಾಯದ ಪ್ರಮಾಣಪತ್ರವನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ದಿಃ03.08.2021 ರಂದು ಆರೋಪಿಯ ವಿರುದ್ಧ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ.

ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ 1 ಎಂದು ಗುರುತಿಸಲಾಗಿದ್ದು ಮತ್ತು ಸಾಕ್ಷಿಯ ಸಹಿಯನ್ನು ನಿ ಪಿ 1(ಬಿ) ಎಂದು ಗುರುತಿಸಲಾಯಿತು. ಪ್ರ ವ ವರದಿಯನ್ನು ನೋಡಿ ಸಾಕ್ಷಿ ಗುರುತಿಸಿದ್ದು ಅದನ್ನು ನಿ ಪಿ 4 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿ ಪಿ 4(ಎ) ಎಂದು ಗುರುತಿಸಲಾಯಿತು. ಮಹಜರ್ ಅನ್ನು ನೋಡಿ ಸಾಕ್ಷಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 2 ಎಂದು ಗುರುತಿಸಲಾಗಿದ್ದು ಹಾಗೂ ಸಾಕ್ಷಿಯ ಸಹಿಯನ್ನು ನಿ ಪಿ 2(ಬಿ) ಎಂದು ಗುರುತಿಸಲಾಯಿತು. ಗಾಯದ ಪ್ರಮಾಣಪತ್ರವನ್ನು ನೋಡಿ ಸಾಕ್ಷಿ ಗುರುತಿಸಿದ್ದು ಅದನ್ನು ಈಗಾಗಲೇ ನಿ ಪಿ 3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಾಕ್ಷಿಯ ಸಹಿಯನ್ನು ನಿ ಪಿ 3(ಬಿ) ಎಂದು ಗುರುತಿಸಲಾಯಿತು. 2 ನೇ ಆರೋಪಿಯನ್ನು ನೋಡಿ ಸಾಕ್ಷಿ ಗುರುತಿಸಿರುತ್ತಾರೆ. 1 ನೇ ಆರೋಪಿ ಗೈರು ಹಾಜರಿದ್ದು ಅವರನ್ನು ಗುರುತಿಸಲು ತಮ್ಮ ತಕರಾರು ಇರುವುದಿಲ್ಲ ಎಂದು ಆರೋಪಿ ಪರ ವಕೀಲರು ತಿಳಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಕೆ ಎಂ ಯು ವಕೀಲರಿಂದಃ**

ಯಾವುದೇ ಘಟನೆ ಆಗದಿದ್ದರೂ ಕೂಡಾ ನಾನು ಆರೋಪಿಗಳ ವಿರುದ್ಧ ಚಾ ಸಾ 1 ರವರು ನೀಡಿದ ಸುಳ್ಳು ದೂರಿನ ಆಧಾರದ ಮೇಲೆ ಸುಳ್ಳು ಮೊಕದ್ದಮೆ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಅದೇ ರೀತಿ ನಾನು ಯಾವುದೇ ಸ್ಥಳಕ್ಕೆ ಭೇಟಿ ಮಾಡದೇ ಠಾಣೆಯಲ್ಲೆ ನಿ ಪಿ 2 ಅನ್ನು ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ. ಅದೇ ರೀತಿ ನಾನು ಯಾವುದೇ ಮರುಹೇಳಿಕೆಯನ್ನಾಗಲಿ ಅಥವಾ ಸಾಕ್ಷಿದಾರರ ಹೇಳಿಕೆಯನ್ನಾಗಲೀ ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಗಾಯದ ಪ್ರಮಾಣಪತ್ರವನ್ನು ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಚಾ ಸಾ 1 ರವರಿಗೆ ಅನುಕೂಲವಾಗುವಂತೆ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿಯಾಗಿದೆ.

(ಸಚಿನ್ ಹೆಚ್ . ಆರ್.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ತಿ.ನರಸೀಪುರ.